# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 962 (1041)
ಸದಸ್ಯರ ಹೆಸರು : ಶ್ರೀ ಎನ್. ರವಿಕುಮಾರ್,
(ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ : 25.07.2024
ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಗಳು

| ಕ್ರಮ ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಐ.ಎಂ.ಎ ಹಗರಣದಲ್ಲಿ ಆರೋಪಿತರಾದ ಐಪಿಎಸ್ ಅಧಿಕಾರಿಗಳಿಗೆ ಯಾವ ದಿನಾಂಕದಂದು ಇಲಾಖಾ ವಿಚಾರಣೆಯ ಸಂಬಂಧ ನೋಟಿಸ್ ನೀಡಲಾಗಿದೆ; ಯಾವ ಅಧಿಕಾರಿಗಳನ್ನು ವಿಚಾರಣಾ ಅಧಿಕಾರಿಯನ್ನಾಗಿ ನೇಮಿಸಲಾಗಿದೆ; ಇದುವರೆಗೆ ಎಷ್ಟು ದಿನಗಳ ಕಾಲ ಇಲಾಖಾ ವಿಚಾರಣೆ ನಡೆಸಲಾಗಿದೆ; (ದಿನಾಂಕದೊಂದಿಗೆ ಮಾಹಿತಿ ನೀಡುವುದು) | ಐ.ಎಂ.ಎ ಪ್ರಕರಣದಲ್ಲಿ ಆರೋಪಿತರಾದ ಶ್ರೀ ಹೇಮಂತ್ ನಿಂಬಾಳ್ಕರ್, ಐಪಿಎಸ್ ಹಾಗೂ ಶ್ರೀ ಅಜಯ್ ಹಿಲೋರಿ, ಐಪಿಎಸ್ ಇವರಿಗೆ ಕ್ರಮವಾಗಿ ದಿನಾಂಕ: 02.02.2021 ರಂದು ಹಾಗೂ 01.02.2021 ರಂದು ದೋಷಾರೋಪಣಾ ಪಟ್ಟಿ ಜಾರಿ ಮಾಡಲಾಗಿತ್ತು.<br><br>ಶ್ರೀ ಅಜಯ್ ಹಿಲೋರಿ, ಐಪಿಎಸ್ ಇವರ ಇಲಾಖಾ ವಿಚಾರಣೆ ಕುರಿತಂತೆ ಶ್ರೀ ಜಿ. ವಿ ಕೃಷ್ಣ ರಾವ್, (ನಿವೃತ್ತ ಭಾ.ಆ.ಸೇ) ಇವರನ್ನು ವಿಚಾರಣಾಧಿಕಾರಿಯವರನ್ನಾಗಿ ಹಾಗೂ ಶ್ರೀ ಸುಬ್ರಮಣ್ಯೇಶ್ವರ ರಾವ್, ಐಪಿಎಸ್ ಇವರನ್ನು ಮಂಡನಾಧಿಕಾರಿಯವರನ್ನಾಗಿ ದಿ: 27.09.2021 ನೇಮಕ ಮಾಡಲಾಗಿತ್ತು. ವಿಚಾರಣಾಧಿಕಾರಿಯವರು ದಿನಾಂಕ: 23.05.2022 ರಂದು ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ್ದು, ಸದರಿ ವರದಿಯನ್ನು ಆಧರಿಸಿ ಅಧಿಕಾರಿಯವರ ವಿರುದ್ಧದ ಇಲಾಖಾ ವಿಚಾರಣೆಯನ್ನು ದಿನಾಂಕ: 15.06.2023ರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 09 ಎಸ್ ಪಿಎಸ್ 2021 ರಲ್ಲಿ ಮುಕ್ತಾಯಗೊಳಿಸಲಾಗಿದೆ.<br><br>ಶ್ರೀ ಹೇಮಂತ್ ನಿಂಬಾಳ್ಕರ್, ಐಪಿಎಸ್ ಇವರ ಇಲಾಖಾ ವಿಚಾರಣೆ ಕುರಿತಂತೆ ಶ್ರೀ ಕೆ ಎಂ ತಮ್ಮಯ್ಯ ನಿವೃತ್ತಿ ಜಿಲ್ಲಾ ಮತ್ತು ಸತ್ರಾ ನ್ಯಾಯಾಲಯ ಇವರನ್ನು ವಿಚಾರಣಾಧಿಕಾರಿಯವರನ್ನಾಗಿ ಹಾಗೂ ಶ್ರೀ ಎಸ್ ಮುರುಗನ್, ಐಪಿಎಸ್, ಎಡಿಜಿಪಿ ಇವರನ್ನು ಮಂಡಣಾಧಿಕಾರಿಯನ್ನಾಗಿ ನೇಮಕ ಮಾಡಲಾಗಿತ್ತು. ವಿಚಾರಣಾಧಿಕಾರಿಯವರು ದಿನಾಂಕ: 30.06.2023 ರಂದು ವಿಚಾರಣಾ ವರದಿಯನ್ನು ಸಲ್ಲಿಸಿದ್ದು, ಅಧಿಕಾರಿಯವರ ವಿರುದ್ಧ ಮಾಡಲಾದ ಯಾವುದೇ ಆರೋಪಗಳು |

| | | |
|---|---|---|
| | | ಸಾಬೀತಾಗಿರುವುದಿಲ್ಲವೆಂದು ವರದಿಯಲ್ಲಿ ತಿಳಿಸಲಾಗಿತ್ತು. ಸದರಿ ವಿಚಾರಣಾ ವರದಿಯನ್ನು ಒಪ್ಪಿ ಶ್ರೀ ಹೇಮಂತ್ ನಿಂಬಾಳ್ಕರ್, ಐಪಿಎಸ್ ಇವರನ್ನು ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 9 ಎಸ್‌ಪಿಎಸ್ 2021 (ಪಿ), ದಿನಾಂಕ: 31.07.2023 ರಲ್ಲಿ ದೋಷ ಮುಕ್ತಗೊಳಿಸಲಾಗಿದೆ. |
| ಆ) | ತನಿಖಾ ಸಂಸ್ಥೆಯು ಐ.ಎಂ.ಎ ಹಗರಣದಲ್ಲಿ ಆರೋಪಿತರಾದ ಐಪಿಎಸ್ ಅಧಿಕಾರಿಗಳ ಮೇಲೆ ಯಾವ ರೀತಿಯ ಕ್ರಮ ಕೈಗೊಳ್ಳಬೇಕೆಂದು ಶಿಫಾರಸ್ಸು ಮಾಡಿದೆ; ಯಾವ ದಿನಾಂಕದಂದು ಮಾಡಿದೆ; ಈ ಕುರಿತು ಸರ್ಕಾರ ಕೈಗೊಂಡ ಕ್ರಮವೇನು? | ತನಿಖಾ ಸಂಸ್ಥೆಯು ಆರೋಪಿತ ಅಧಿಕಾರಿಗಳ ವಿರುದ್ಧ ನ್ಯಾಯಲಯದಲ್ಲಿ ಪ್ರಕರಣವನ್ನು ದಾಖಲಿಸಲು ಅಭಿಯೋಜನಾ ಮಂಜೂರಾತಿಯನ್ನು ಈ ಇಬ್ಬರೂ ಅಧಿಕಾರಿಗಳ ವಿರುದ್ಧ ದಿನಾಂಕ: 18.12.2019 ರಂದು ಕೋರಿರುತ್ತದೆ. ದಿನಾಂಕ: 09.09.2020 ರ ಆದೇಶದಲ್ಲಿ 197 ಸಿಆರ್‌ಪಿಸಿ ಅಡಿಯಲ್ಲಿ ಅಭಿಯೋಜನಾ ಮಂಜೂರಾತಿಯನ್ನು ನೀಡಲಾಗಿದೆ.<br><br>ಸದರಿ ಅಧಿಕಾರಿಗಳ ವಿರುದ್ಧ ಇಲಾಖೆಯಿಂದ ಶಿಸ್ತು ಕ್ರಮ ಕೈಗೊಳ್ಳಲು ಸಹ ಶಿಫಾರಸ್ಸು ಮಾಡಿರುತ್ತದೆ. ಅದರಂತೆ, ದಿನಾಂಕ: 01.02.2021 ಹಾಗೂ 02.02.2021 ರಂದು ದೋಷಾರೋಪಣಾ ಪಟ್ಟಿಯನ್ನು ಜಾರಿ ಮಾಡಲಾಗಿತ್ತು. ಪ್ರಸ್ತುತ, ಸದರಿ ಐಪಿಎಸ್ ಅಧಿಕಾರಿಗಳ ವಿರುದ್ಧ ಇಲಾಖಾ ವಿಚಾರಣೆಯಲ್ಲಿ ಆರೋಪಗಳು ಸಾಬೀತಾಗದೇ ಇದ್ದುದರಿಂದ ಇಲಾಖೆ ವಿಚಾರಣೆಯನ್ನು ಮುಕ್ತಾಯಗೊಳಿಸಲಾಗಿದೆ. |
| ಇ) | ಐ.ಎಂ.ಎ ಹಗರಣದಲ್ಲಿ ಆರೋಪಿತರಾದ ಐಪಿಎಸ್ ಅಧಿಕಾರಿಗಳ ಮೇಲಿನ ಆರೋಪದ ಕುರಿತು ಯು.ಪಿ.ಎಸ್‌ಸಿ ಮತ್ತು ಕೇಂದ್ರ ಗೃಹ ಇಲಾಖೆಗೆ ಪತ್ರ ಬರೆಯಲಾಗಿದೆಯೇ;, ಯಾವ ದಿನಾಂಕದಂದು ಬರೆಯಲಾಗಿದೆ; ಭ್ರಷ್ಟ ಅಧಿಕಾರಿಗಳನ್ನು ಕಡ್ಡಾಯ ನಿವೃತ್ತಿಗೊಳಿಸುವ ನಿಯಮದ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು) | ಶ್ರೀ ಹೇಮಂತ್ ನಿಂಬಾಳ್ಕರ್, ಐಪಿಎಸ್ ಮತ್ತು ಶ್ರೀ ಅಜಯ್ ಹಿಲೋರಿ, ಐಪಿಎಸ್ ಇವರನ್ನು ಭ್ರಷ್ಟಾಚಾರ ನಿಗ್ರಹ ಕಾಯ್ದೆ ಅಡಿಯಲ್ಲಿ ಅಭಿಯೋಜನೆಗೆ ಒಳಪಡಿಸಲು ಕೇಂದ್ರ ಗೃಹ ಮಂತ್ರಾಲಯದಿಂದ ಕ್ರಮವಾಗಿ ದಿನಾಂಕ: 17.07.2023 ಮತ್ತು 16.03.2022 ಮಂಜೂರಾತಿ ಆದೇಶವನ್ನು ಪಡೆಯಲಾಗಿದೆ.<br><br>ಇಲಾಖಾ ವಿಚಾರಣೆಯಲ್ಲಿ ಆರೋಪಗಳು ಸಾಬೀತಾಗದೇ ಇದ್ದುದರಿಂದ ಇಲಾಖಾ ವಿಚಾರಣೆಗಳನ್ನು ಮುಕ್ತಾಯಗೊಳಿಸಲಾಗಿದೆ. ಸದರಿ ಅಧಿಕಾರಿಗಳ ವಿರುದ್ಧ ನ್ಯಾಯಾಂಗ ಪ್ರಕರಣಗಳು ಬಾಕಿ ಇರುವುದರಿಂದ, ವಿಚಾರಣೆ ಅಂತಿಮಗೊಂಡ ನಂತರ ಕ್ರಮ ಕೈಗೊಳ್ಳಬೇಕಾಗುತ್ತದೆ. |
| ಈ) | ಐಪಿಎಸ್ ಅಧಿಕಾರಿಗಳು ಈ ಪ್ರಕರಣದಲ್ಲಿ ಭಾಗಿಯಾಗಿರುವ ಕಾರಣಕ್ಕಾಗಿ ಅವರನ್ನು | ಪ್ರಕರಣದಲ್ಲಿ ಭಾಗಿಯಾಗಿದ್ದಾರೆ ಎನ್ನಲಾದ ಐಪಿಎಸ್ ಅಧಿಕಾರಿಗಳ ವಿರುದ್ಧ |

| | | |
|---|---|---|
| | ರಕ್ಷಿಸಲು ಮತ್ತು ಕೆಳಹಂತದ ಅಧಿಕಾರಿಗಳನ್ನು ಮಾತ್ರವೇ ಶಿಕ್ಷಿಸಲು ಲಾಭಿ ನಡೆಯುತ್ತಿರುವ ಕುರಿತು ಸರ್ಕಾರದ ನಿಲುವೇನು? ಐ.ಎಂ.ಎ ಹಗರಣದಲ್ಲಿ ಆರೋಪಿತರಾದ ಐಪಿಎಸ್ ಅಧಿಕಾರಿಗಳಿಗೆ ಮುಂಬಡ್ತಿಯನ್ನು ನೀಡುವ ಮೂಲಕ ಭ್ರಷ್ಟ ಅಧಿಕಾರಿಗಳನ್ನು ಸರ್ಕಾರ ರಕ್ಷಿಸುತ್ತದೆ ಮತ್ತು ಭ್ರಷ್ಟಚಾರವನ್ನು ಪ್ರೋತ್ಸಾಹಿಸುತ್ತದೆ ಎಂಬುದರ ಕುರಿತು ಸರ್ಕಾರದ ನಿಲುವೇನು | ನಿಯಮಾನುಸಾರ ಅಗತ್ಯ ಕ್ರಮವಹಿಸಲಾಗುತ್ತಿದೆ.<br><br>ಸದರಿ ಅಧಿಕಾರಿಗಳ ಮುಂಬಡ್ತಿಯನ್ನು ಕಾನೂನಾತ್ಮಕವಾಗಿ ಪರಿಶೀಲಿಸಿ ನಿಯಮಾನುಸಾರ ನೀಡಲಾಗಿದೆ. |

ಸಂಖ್ಯೆ: ಇ-ಸಿಆಸುಇ 188 ಎಸ್‌ಪಿಎಸ್ 2024

(ಸಿದ್ದರಾಮಯ್ಯ)
ಮುಖ್ಯಮಂತ್ರಿ